ಕರ್ನಾಟಕ ಸರ್ಕಾರ
ಹೇಳಿಕೆ ಹಾಳೆ
(ಆರ್ ಪಿ ಸಂಖ್ಯೆ57)
ನಮೂನೆ ಸಂಖ್ಯೆ4

ಸಿ ಆರ್ ಪಿ 67

## ಪ್ರಧಾನ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಸಿಂಧನೂರು

## CC No.739/2014 CW-28 PW-24

| | | |
|---|---|---|
| ಹೆಸರು | : | ಬಾಬು |
| ತಂದೆಯ/ಗಂಡನ ಹೆಸರು | : | ಗದ್ದಯ್ಯ |
| ವಯಸ್ಸು | : | 30 ವರ್ಷ |
| ಉದ್ಯೋಗ | : | ಆಟೋ ಚಾಲಕ |
| ವಾಸಸ್ಥಳ | : | ಸಿಂಧನೂರು |

ಸಾಕ್ಷಿಗೆ ಪ್ರಮಾಣ ವಚನ ಬೋದಿಸಿದ ದಿನಾಂಕಃ 12-06-2023

### ಮುಖ್ಯ ವಿಚಾರಣೆಃ ಸ.ಸ.ಅ. ರವರಿಂದ

ಚಾಸಾ-29 ರವರ ಪರಿಚಯ ಇದೆ. ಆರೋಪಿತರ ಪರಿಚಯ ಇರುವುದಿಲ್ಲ. ನನ್ನನ್ನು ಮತ್ತು ಚಾಸಾ-29 ರವರನ್ನು ಎಲ್ಲಿಯೂ ಕರೆಸಿರಲಿಲ್ಲ, ನಮ್ಮ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ. ಆದರೆ 10 ವರ್ಷಗಳ ಹಿಂದೆ ನಮ್ಮನ್ನು ಪೋಲೀಸ ಠಾಣೆಗೆ ಕರೆಸಿ, ಒಂದು ದಾಖಲೆಗೆ ನಮ್ಮ ಸಹಿ ಪಡೆದಿದ್ದಾರೆ. ಸಾಕ್ಷಿಯು ನಿಪಿ-64 ರಲ್ಲಿರುವ ತಮ್ಮ ಸಹಿ ನೋಡಿ ಗುರುತಿಸಿದ್ದರಿಂದ, ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಪಿ-64 ಬಿ ಎಂದು ಗುರುತಿಸಲಾಯಿತು. ನಿಪಿ-64 ರಲ್ಲಿ ಏನು ಬರೆದಿದೆ ನನಗೆ ಗೊತ್ತಿಲ್ಲ. ನಮ್ಮ ಸಮಕ್ಷಮ ಪೋಲೀಸರು ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ ಅನುಮತಿ ನೀಡಲಾಯಿತು)

### ಪಾಟೀ ಸವಾಲು: ಮಾನ್ಯ ಸ ಸ ಅ ರವರಿಂದ

ದಿಃ 09-08-2013 ರಂದು ಮಧ್ಯಾಹ್ನ 3-30 ರಿಂದ 4-15 ಗಂಟೆಯವರೆಗೆ ಸಿಂಧನೂರಿನ ಜೀವನಶ್ರೀ ಚಿಟ್ಸ್‌ಗೆ ಕರೆಸಿದ್ದರು ಎಂದರೆ ಸರಿ ಅಲ್ಲ. ಅಲ್ಲಿ 1 ನೇ ಆರೋಪಿಯು ಹಾಜರಪಡಿಸಿದ 3 ಲಕ್ಷ ನಗದು ಹಣವನ್ನು ನಮ್ಮ ಸಮಕ್ಷಮ ಪೋಲೀಸರು ಅಮಾನತ್ತುಪಡಿಸಿಕೊಂಡರು ಎಂದರೆ ಸರಿ

ಅಲ್ಲ. ಈ ಬಗ್ಗೆ ನಿಪಿ-64 ರಂತೆ ಪಂಚನಾಮೆ ಜರುಗಿಸಿ, ಓದಿ ಹೇಳಿ ನಮ್ಮ ಸಹಿ ಪಡೆದಿದ್ದಾರೆ ಎಂದರೆ ಸರಿ ಅಲ್ಲ. ಈಗ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳುಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿ ಅಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ</u>

ಇರುವುದಿಲ್ಲ.

ಮರುವಿಚಾರಣೆ ಇಲ್ಲ.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ)

ಓ ಹೇ ಕೇ ಸರಿ ಇದೆ.

ಪ್ರಧಾನ ಜೆ.ಎಮ್.ಎಫ್.ಸಿ., ಸಿಂಧನೂರು.